ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	797
ಮಾನ್ಯ ಸದಸ್ಯರ ಹೆಸರು	:	ಶ್ರೀ ಮುನಿರಾಜು ಗೌಡ ಪಿ.ಎಂ
ಉತ್ತರಿಸುವ ದಿನಾಂಕ	:	20.12.2021
ಉತ್ತರಿಸುವ ಸಚಿವರು	:	ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಶುಲ್ಕ ಹೆಚ್ಚಳ ಮಾಡಲಾಗಿದೆಯೇ;	ಹೌದು
ಆ)	ಹಾಗಿದ್ದಲ್ಲಿ ಯಾವ ಯಾವ ಶುಲ್ಕವನ್ನು ಎಷ್ಟು ಪ್ರಮಾಣದಲ್ಲಿ ಹೆಚ್ಚು ಮಾಡಲಾಗಿದೆ; ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ವಾರ್ಷಿಕ ಒಟ್ಟಾರೆ ಉಂಟಾಗುವ ಹೆಚ್ಚಿನ ಆರ್ಥಿಕ ಹೊರೆ ಎಷ್ಟು; ಶುಲ್ಕ ಹೆಚ್ಚಳದಿಂದ ರಾಜ್ಯ ಸರ್ಕಾರಕ್ಕೆ ಬರುವ ಆದಾಯವೆಷ್ಟು;	ಸರ್ಕಾರದ ಪತ್ರ ಸಂಖ್ಯೆ:ಇಡಿ 141 ಡಿಟಿಇ 2021 ದಿನಾಂಕ:04-12-2021ರಂತೆ ಇತರೆ ಶುಲ್ಕ ರೂ.10,000/-ಗಳನ್ನು ಹೆಚ್ಚುವರಿಯಾಗಿ ನಿಗದಿಪಡಿಸಲಾಗಿದೆ. ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಸರ್ಕಾರದಿಂದ, ಸರಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಬಿಡುಗಡೆ ಮಾಡುವ ಅನುದಾನದೊಂದಿಗೆ 2021-22ನೇ ಶೈಕ್ಷಣಿಕ ಸಾಲಿನಿಂದ ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳಿಂದ ಇತರೆ ಶುಲ್ಕವಾಗಿ ರೂ.10,000/-ಗಳನ್ನು ಸಂಗಹಿಸಲು ಹಾಗೂ ಸಂಗ್ರಹಿಸಿದ ಮೊತ್ತವನ್ನು ಸಂಸ್ಥೆಯ ಪಿ.ಡಿ. ಖಾತೆಯಲ್ಲಿ ಉಳಿಸಿಕೊಂಡು ಅತ್ಯಾವಶ್ಯಕವಾಗಿರುವ ಪ್ರಯೋಗಾಲಯ ಉಪಕರಣಗಳನ್ನು ಹಾಗೂ ಪುಸ್ತಕಗಳನ್ನು ನಿರ್ದಿಷ್ಟ ಉದ್ದೇಶಕ್ಕಾಗಿ ಇಲಾಖೆಯ ಮುಖ್ಯಸ್ಥರ ಅನುಮತಿಯೊಂದಿಗೆ ನಿಯಮಾನುಸಾರ ಖರೀದಿಸಲು ಅವಕಾಶ ಕಲ್ಪಿಸಲಾಗಿದೆ. ಈ ಶುಲ್ಕವು ಸರ್ಕಾರದ ಬೊಕ್ಕಸಕ್ಕೆ ಸಂದಾಯವಾಗದ ಕಾರಣ ಇದರಿಂದ ಸರ್ಕಾರಕ್ಕೆ ಯಾವುದೇ ಆದಾಯ ಬರುವುದಿಲ್ಲ.

ಇ)	ಈ ಶುಲ್ಕ ಹೆಚ್ಚಳವು ರಾಜ್ಯದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಿಗೆ ಮಾತ್ರ ಅನ್ವಯಿಸುವುದೇ;	ಹೌದು
ಈ)	ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿಗೆ ಸೇರುವ ಬಹುತೇಕ ವಿದ್ಯಾರ್ಥಿಗಳು ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ಸೇರಿದವರಾಗಿದ್ದು, ಕೋವಿಡ್, ಅಕಾಲಿಕ ಮಳೆ, ಪ್ರವಾಹ ಪರಿಸ್ಥಿತಿಗಳಿಂದ ಸಾಮಾನ್ಯ ಜೀವನ ಕಷ್ಟಕರವಾಗಿರುವಂತಹ ಈ ಸಂದರ್ಭದಲ್ಲಿ ಶುಲ್ಕ ಹೆಚ್ಚಳದಿಂದ ವಿದ್ಯಾರ್ಥಿಗಳಿಗೆ ಉಂಟಾಗುತ್ತಿರುವ ಹೆಚ್ಚಿನ ಆರ್ಥಿಕ ಹೊರೆಯನ್ನು ತಪ್ಪಿಸುವ ಬಗ್ಗೆ ಸರ್ಕಾರದ ನಿಲುವೇನು?	ಆರ್ಥಿಕವಾಗಿ ಹಿಂದುಳಿದ ಬಡ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡುವ ಉದ್ದೇಶದಿಂದ ಅತ್ಯಾಧುನಿಕ ಪ್ರಯೋಗಾಲಯ ಉಪಕರಣಗಳು ಹಾಗೂ ಉತ್ತಮ ಗುಣಮಟ್ಟದ ಪುಸ್ತಕಗಳನ್ನು ಒದಗಿಸುವ ಉದ್ದೇಶದಿಂದ ಮಾತ್ರ ಇತರೇ ಶುಲ್ಕವನ್ನು ಪಡೆಯಲು ಉದ್ದೇಶಿಸಲಾಗಿರುತ್ತದೆ.

ಇಡಿ 258 ಟಿಇಸಿ 2021

(ಡಾ॥ ಅಶ್ವತ್ಥನಾರಾಯಣ್.ಸಿ.ಎನ್)

ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರು